ಇ) ಹಾಗಿದ್ದಲ್ಲಿ ಕನ್ನಡ ಮಾಧ್ಯಮದ ಶಾಲೆಗಳನ್ನು ಪ್ರಾರಂಭಿಸಲು ಯಾವ ಪ್ರೋತ್ಸಾಹ ನೀಡಿದೆ?

ಈ) ಈರೀತಿ ಇಂಗ್ಲೀಷ್ ಮಾಧ್ಯಮದ ಶಾಲೆಗಳನ್ನು ತೆರೆಯಲು ಅನುಮತಿ ನೀಡುವುದರಿಂದ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

ಶ್ರೀ ಎಂ. ರಘುಪತಿ (ಶಿಕ್ಷಣ ಸಚಿವರು).—

(ಅ)

	ಪ್ರಾಥಮಿಕ ಶಾಲೆಗಳು	ಪ್ರೌಢ ಶಾಲೆಗಳು
೧) ೮೧–೮೨	೧೯	೧೧
೨) ೮೨–೮೩	೧೪	೨೦
೩) ೮೩–೮೪	೫೭	—
೪) ೮೪–೮೫	೬	೩೬
೫) ೮೫–೮೬	೧	೨೯

(ಆ) ತೊಂದರೆಯಾಗುವುದು ಕಂಡು ಬಂದಿಲ್ಲ. ಇಂಗ್ಲೀಷ್ ಮಾಧ್ಯಮದ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಕಲಿಸಲಾಗುತ್ತಿದೆ. ೧೯೮೫–೮೬ ನೇ ಸಾಲಿನಲ್ಲಿ ನೀಡಿರುವ ಆಂಗ್ಲ ಪ್ರೌಢಶಾಲೆಗಳಲ್ಲಿ ಕನ್ನಡ ಮಾಧ್ಯಮದ ತರಗತಿಗಳನ್ನು ಕಡ್ಡಾಯವಾಗಿ ತೆರೆಯಬೇಕೆಂಬ ಷರತ್ತನ್ನು ಹಾಕಲಾಗಿದೆ.

(ಇ) ಹೆಚ್ಚು ಹೆಚ್ಚಾಗಿ ಕನ್ನಡ ಮಾಧ್ಯಮದ ಪ್ರಾಥಮಿಕ ಶಾಲೆಗಳು ಹಾಗೂ ಪ್ರೌಢಶಾಲೆಗಳನ್ನು ತೆರೆಯುವುದು, ಖಾಸಗಿ ಶಾಲೆಗಳಿಗೆ ಅನುದಾನ ನೀಡುವುದು, ಏಕೋಪಾಧ್ಯಾಯ ಶಾಲೆಗಳಿಗೆ ಅಧಿಕ ಉಪಾಧ್ಯಾಯರನ್ನು ಒದಗಿಸುವುದು ಇವೇ ಮೊದಲಾದ ಕಾರ್ಯಕ್ರಮಗಳಿಂದ ಸರ್ಕಾರವು ಕನ್ನಡ ಮಾಧ್ಯಮ ಶಾಲೆಗಳನ್ನು ಪ್ರೋತ್ಸಾಹಿಸುತ್ತಿದೆ.

(ಈ) ಇಲ್ಲ.

ಹಾಲು ಶೀತಲೀಕರಣ ಪ್ರಾರಂಭಿಸುವ ಬಗ್ಗೆ

೧೧೨ (೩೬೦) ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).—ಈ ಕೆಳಕಂಡ ಪ್ರಶ್ನೆಗಳಿಗೆ ಮಾನ್ಯ ಪಶುವೈದ್ಯ ಹಾಗೂ ಪಶುಸಂಗೋಪನಾ ರಾಜ್ಯ ಮಂತ್ರಿಗಳು ದಯವಿಟ್ಟು ಉತ್ತರಿಸುವರೆ:—

ಅ) ಶಿಕಾರಿಪುರ ತಾಲ್ಲೂಕು ತಡಗಣಿ ಹಿಪ್ಪರಿ ಹಾಲು ಶೀತಲೀಕರಣ ಕೇಂದ್ರ ಪ್ರಾರಂಭಿಸಲು ಕಟ್ಟಿಸಿರುವ ಕಟ್ಟಡದ ಕೆಲಸ ಮುಗಿದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಈ ಹಾಲು ಶೀತಲೀಕರಣ ಕೇಂದ್ರವನ್ನು ಪ್ರಾರಂಭಿಸಲು ಬೇಕಾದ ಉಪಕರಣಗಳು ಬಂದಿದೆಯೇ ?

ಇ) ಹಾಗಿದ್ದಲ್ಲಿ, ಈ ಕೇಂದ್ರವ ಕಾರ್ಯಾಚರಣೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿದ್ಧರಾಮಯ್ಯ (ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ರಾಜ್ಯ ಸಚಿವರು).—

ಅ) ಇಲ್ಲ. ಕಟ್ಟಡದ ಕೆಲಸ ಪೂರ್ಣಗೊಂಡಿಲ್ಲ.

ಆ) ಇಲ್ಲ.

ಇ) ಕಟ್ಟಡದ ಕೆಲಸ ಮುಗಿದ ನಂತರ ಕರ್ನಾಟಕದಲ್ಲಿ ಕಾರ್ಯಾಚರಣೆ ಹೊನಲು-೨ ಡೈರಿ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಶೀತಲೀಕರಣ ಕೇಂದ್ರವನ್ನು ಪ್ರಾರಂಭಿಸಲಾಗುವುದು.